## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿಶ್ವವಿದ್ಯಾಲಯಗಳಲ್ಲಿ ಈಗಾಗಲೇ ಸ್ಥಾಪಿಸಿರುವ ಹಿಂದುಳಿದ ವರ್ಗಗಳ ಕೋಶವನ್ನು ಬಲಪಡಿಸಲು (OBC Cell) ಹಾಗೂ ಸಂಶೋಧನಾ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಮತ್ತು ದಾವಣಗೆರೆ ವಿಶ್ವವಿದ್ಯಾಲಯಕ್ಕೆ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:-

1. 2015-16ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯ ಕಂಡಿಕೆ ಸಂಖ್ಯೆ:216.
2. ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 523 ಬಿಎಂಎಸ್ 2015, ದಿನಾಂಕ:21.07.2015.
3. KU/MOBC/2015-16, Dated: 07.10.2015.
4. ದಾವಿವಿ:ಮಾಸನಿ-268/2015-16, ದಿನಾಂಕ:20.09.2015.
5. ಹಿಂವಕಇ/ತ-2/ವಿಹಿಂಕೋ/ಅಖ-1/2015-16, ದಿನಾಂಕ:13.01.2016.

******

**ಪ್ರಸ್ತಾವನೆ:-**

ಮೇಲೆ ಓದಲಾದ (1)ರಲ್ಲಿ 2015-16ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳು ಮಂಡಿಸಿದ ಆಯವ್ಯಯ ಭಾಷಣದ ಕಂಡಿಕೆ:216ರಲ್ಲಿ "ವಿಶ್ವವಿದ್ಯಾಲಯಗಳಲ್ಲಿ ಈಗಾಗಲೇ ಸ್ಥಾಪಿಸಿರುವ ಹಿಂದುಳಿದ ವರ್ಗಗಳ ಕೋಶವನ್ನು ಬಲಪಡಿಸಲು (OBC Cell) ಹಾಗೂ ಸಂಶೋಧನಾ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ತಲಾ ರೂ.5.00ಲಕ್ಷ ಅನುದಾನವನ್ನು ನೀಡಲಾಗುವುದು. ಇದಕ್ಕಾಗಿ ರೂ.50.00ಲಕ್ಷ ಅನುದಾನ ಒದಗಿಸಲಾಗುವುದು" ಎಂದು ಘೋಷಿಸಲಾಗಿರುತ್ತದೆ.

ಮೇಲೆ ಓದಲಾದ (2)ರಲ್ಲಿ ಕುವೆಂಪು ವಿಶ್ವವಿದ್ಯಾಲಯ ಮತ್ತು ಬೆಂಗಳೂರು ವಿಶ್ವವಿದ್ಯಾಲಯಗಳಲ್ಲಿ ಹಿಂದುಳಿದ ವರ್ಗಗಳ ಕೋಶಗಳನ್ನು ಬಲಪಡಿಸಲು ತಲಾ ರೂ.5.00ಲಕ್ಷ (ರೂಪಾಯಿ ಐದು ಲಕ್ಷಗಳು ಮಾತ್ರ) ಅನುದಾನವನ್ನು ಮಾರ್ಗಸೂಚಿಗಳನ್ವಯ ನೀಡಲು ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (3) ಮತ್ತು (4) ರಲ್ಲಿ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ (OBC Cell) ನ್ನು ದಿನಾಂಕ:19.08.2015ರಲ್ಲಿ ಉದ್ಘಾಟಿಸಲಾಗಿದ್ದು, ಅಂದಿನಿಂದ ಸಕ್ರಿಯ ಕಾರ್ಯನಿರ್ವಹಿಸುತ್ತಿರುವುದಾಗಿ ಹಾಗೂ ದಾವಣಗೆರೆ ವಿಶ್ವವಿದ್ಯಾಲಯದಲ್ಲಿ (OBC Cell) ದಿನಾಂಕ:26.05.2015ರಿಂದ ಕಾರ್ಯನಿರ್ವಹಿಸುತ್ತಿದ್ದು, ಹಿಂದುಳಿದ ವರ್ಗಗಳ ಕೋಶವನ್ನು ಬಲಪಡಿಸಲು ಅನುದಾನವನ್ನು ಬಿಡುಗಡೆ ಮಾಡಲು ಕೋರಿರುತ್ತಾರೆ.

ಮೇಲೆ ಓದಲಾದ (5)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು ಹಾಗೂ ಕರ್ನಾಟಕ ವಿಶ್ವವಿದ್ಯಾಲಯ ಹಾಗೂ ದಾವಣಗೆರೆ ವಿಶ್ವವಿದ್ಯಾಲಯಗಳಲ್ಲಿನ ಹಿಂದುಳಿದ ವರ್ಗಗಳ ಕೋಶವನ್ನು ಬಲಪಡಿಸಲು ಪ್ರತಿ ವಿಶ್ವವಿದ್ಯಾಲಯಕ್ಕೆ ರೂ.5.00ಲಕ್ಷದಂತೆ ಒಟ್ಟು ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ಹಾಗೂ ಮುಂದೆ ಬರುವ ಪ್ರಸ್ತಾವನೆಗಳಿಗೆ ನಿಯಮಾನುಸಾರ ಅನುದನ ಬಿಡುಗಡೆ ಮಾಡಲು ಸರ್ಕಾರದ ಆದೇಶ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 51 ಬಿಎಂಎಸ್ 2016, ಬೆಂಗಳೂರು**
**ದಿನಾಂಕ:08-02-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಮತ್ತು ದಾವಣಗೆರೆ ವಿಶ್ವವಿದ್ಯಾಲಯಗಳಲ್ಲಿ ಹಾಗೂ ಈ ಸಂಬಂಧ ಆಯುಕ್ತಾಲಯಕ್ಕೆ ಈಗಾಗಲೇ ಕೋರಿರುವ ಮತ್ತು ಕೋರುವ ವಿಶ್ವವಿದ್ಯಾಲಯಗಳ ಹಿಂದುಳಿದ ವರ್ಗಗಳ ಕೋಶವನ್ನು ಬಲಪಡಿಸಲು ಹಾಗೂ ಸಂಶೋಧನ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ತಲಾ ರೂ.5.00ಲಕ್ಷ (ರೂಪಾಯಿ ಐದು ಲಕ್ಷಗಳು ಮಾತ್ರ)ಗಳ ಅನುದಾನವನ್ನು ಅನುಬಂಧ-1ರಲ್ಲಿನ ಮಾರ್ಗಸೂಚಿಯನ್ವಯ ಬಿಡುಗಡೆ ಮಾಡಲು ಆದೇಶಿಸಲಾಗಿದೆ.

ಸದರಿ ವೆಚ್ಚವನ್ನು 2015-16ನೇ ಸಾಲಿನ ಲೆಕ್ಕಶೀರ್ಷಿಕೆ:2225-03-277-02-37ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಈ ಆದೇಶವನ್ನು ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ
(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ(ವೆಚ್ಚ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಧಾರವಾಡ ಮತ್ತು ದಾವಣಗೆರೆ ಜಿಲ್ಲೆ.
6. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಧಾರವಾಡ ಮತ್ತು ದಾವಣಗೆರೆ ಜಿಲ್ಲೆ.
7. ಜಿಲ್ಲಾ ಖಜಾನಾಧಿಕಾರಿಗಳು, ಧಾರವಾಡ ಮತ್ತು ದಾವಣಗೆರೆ ಜಿಲ್ಲೆ.
8. ಆಂತರಿಕ ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ.

ಪ್ರತಿ:-

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.